# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 298 |
| ಸದಸ್ಯರ ಹೆಸರು | ಶ್ರೀ ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 22.09.2020. |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿನ ಮುಖ್ಯ ನದಿಗಳ ಪಾತ್ರದಲ್ಲಿನ ಅನಿಯಂತ್ರಿತ ಅಕ್ರಮ ಮರಳು ಗಣಿಗಾರಿಕೆಯಿಂದಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವುದಲ್ಲದೆ, ಪರಿಸರಕ್ಕೆ ತೀವ್ರ ಹಾನಿ ಮತ್ತು ವಿದ್ಯುತ್ ಉತ್ಪಾದನೆಗೂ ತೊಂದರೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ : | ನದಿ ಪಾತ್ರದಲ್ಲಿ ಅನಧಿಕೃತ ಮರಳು ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವುದು ಹಾಗೂ ಪರಿಸರಕ್ಕೆ ಹಾನಿಯಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆ. |
| (ಆ) | ಹಾಗಿದ್ದಲ್ಲಿ, ಅಕ್ರಮ ಮರಳುಗಾರಿಕೆಯನ್ನು ತಡೆಗಟ್ಟಿ, ಪರಿಸರವನ್ನು ಸಂರಕ್ಷಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು: | ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಿ ಪರಿಸರ ಸಂರಕ್ಷಿಸಲು ಸರ್ಕಾರದಿಂದ ಈ ಕೆಳಕಂಡಂತೆ ಕ್ರಮ ವಹಿಸಲಾಗಿರುತ್ತದೆ.<br>• ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ. ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ(ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22ರಡಿಯಲ್ಲಿ ಹಾಗೂ ಕರ್ನಾಟಕ ಉಪ ಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಾವಳಿ 1994ರ ನಿಯಮ 31-Rರ ಉಪ ನಿಯಮ 13 ರಡಿಯಲ್ಲಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯೋಜಿಸಲಾಗಿರುತ್ತದೆ. |

- ಅನಧಿಕೃತ ಮರಳು ಗಣಿಗಾರಿಕೆ/ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಮರಳು ಉಸ್ತುವಾರಿ ಸಮಿತಿಗಳಿಂದ ರಾಜ್ಯದಲ್ಲಿ ಆಯಾಕಟ್ಟಿನ ಪ್ರದೇಶಗಳಲ್ಲಿ ಮರಳು ತನಿಖಾ ಠಾಣೆಗಳನ್ನು ತೆರೆದು ಕಾರ್ಯ ನಿರ್ವಹಿಸಲಾಗುತ್ತಿದೆ. ಅಲ್ಲದೆ ಆಯಾ ಜಿಲ್ಲಾ ವ್ಯಾಪ್ತಿಗಳಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಚಾಲಿತ ದಳವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ/ ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.

- ಮರಳು ಗಣಿಗಾರಿಕೆಗೆ ಗುತ್ತಿಗೆ /ಲೈಸನ್ಸ್ ಮಂಜೂರು ಮಾಡುವ ಪೂರ್ವದಲ್ಲಿ ಕೇಂದ್ರ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯದ ಆದೇಶದಂತೆ ಸಂಬಂಧಪಟ್ಟ ಅರ್ಜಿದಾರರಿಂದ ಕಡ್ಡಾಯವಾಗಿ ಕ್ವಾರಿ ಯೋಜನೆ ಮತ್ತು ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆ / ಲೈಸನ್ಸ್ ಗಳನ್ನು ಮಂಜೂರು ಮಾಡಲಾಗುತ್ತದೆ.

- ಸದರಿ ಗುತ್ತಿಗೆದಾರರುಗಳು ಪರಿಸರ ಅನುಮತಿ ಪತ್ರದಲ್ಲಿನ ಷರತ್ತುಗಳಿಗೆ ಅನುಸಾರವಾಗಿ ಗಣಿ ಕಾರ್ಯ ನಿರ್ವಹಿಸದಿದ್ದರೆ ಅವರುಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕಳೆದ 3 ವರ್ಷಗಳಿಂದ ಅನಧಿಕೃತ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆಯಡಿಯಲ್ಲಿ ಸಂಗ್ರಹಿಸಲಾದ ದಂಡದ ಮೊತ್ತ ಮತ್ತು ಮೊಕದಮ್ಮೆ ವಿವರಗಳು ಈ ಕೆಳಕಂಡಂತಿರುತ್ತದೆ.

| ವರ್ಷ | ಅನಧಿಕೃತ ಮರಳು ಗಣಿಗಾರಿಕೆ | | | ಅನಧಿಕೃತ ಮರಳು ಸಾಗಾಣಿಕೆ | | |
|---|---|---|---|---|---|---|
| | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಸೂಲಾದ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮ್ಮೆಗಳ ಸಂಖ್ಯೆ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಸೂಲಾದ ದಂಡ (ರೂ.ಲಕ್ಷಗಳಲ್ಲಿ ) | ದಾಖಲಿಸಿದ ಮೊಕದ್ದಮ್ಮೆಗಳ ಸಂಖ್ಯೆ |
| 2017-18 | 286 | 191.43 | 159 | 3600 | 666.53 | 24.27 |
| 2018-19 | 191 | 54.62 | 106 | 3361 | 375.57 | 2584 |
| 2019-20 | 240 | 128.81 | 106 | 2676 | 271.01 | 1866 |

| | | |
|---|---|---|
| (ಇ) | ಈ ಬಗ್ಗೆ ಸರ್ಕಾರ ಕಟ್ಟುನಿಟ್ಟಿನ ಕಾನೂನು ರಚಿಸಲಾಗುವುದೇ ? | ಸರ್ಕಾರವು ದಿನಾಂಕ:30.06.2020 ರಂದು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ-1994 ರ ನಿಯಮ 43 ಕ್ಕೆ ತಿದ್ದುಪಡಿ ತಂದಿದ್ದು ಸದರಿ ತಿದ್ದುಪಡಿ ನಿಯಮದಲ್ಲಿ ಅನಧಿಕೃತ ಮರಳು ಹಾಗೂ ಇತರೆ ಉಪಖನಿಜಗಳ ಸಾಗಾಣಿಕೆಯಡಿಯಲ್ಲಿ ಹೆಚ್ಚಿನ ದಂಡದ ಮೊತ್ತವನ್ನು ವಸೂಲಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. |

ಸಂಖ್ಯೆ: ಸಿಐ 446 ಎಂಎಂಎನ್ 2020

(ಸಿ.ಸಿ. ಪಾಟೀಲ)

ಗಣಿ ಮತ್ತು ಭೂವಿಜ್ಞಾನ ಸಚಿವರು

ಗಣಿ ಮತ್ತು ಭೂವಿಜ್ಞಾನ ಸಚಿವರು